**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳರವರ ನ್ಯಾಯಾಲಯ**

**ಆಳಂದ**

ಸಿ.ಸಿ, ನಂಬರ 2410/2025 ಸಿ.ಡಬ್ಲ್ಯೂ.20 ಪಿ.ಡಬ್ಲ್ಯೂ.7

| | |
|---|---|
| ಹೆಸರು | ಶಾಂತಪ್ಪಾ |
| ತಂದೆ/ಗಂಡ | ನಿಂಗಪ್ಪಾ |
| ವಯಸ್ಸು | 54 ವರ್ಷ |
| ಉದ್ಯೋಗ | ಎ.ಎಸ್.ಐ |
| ವಾಸಸ್ಥಳ | ಮಾದನ ಹಿಪ್ಪರಗಾ |

ದಿನಾಂಕ 06-03-2026
ಸತ್ಯ ಪ್ರತಿಜ್ಞೆಯ ಮೇರೆಗೆ

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ವಕೀಲರಿಂದ:**

ನಾನು ದಿಃ 15-08-2024 ರಿಂದ ಇಲ್ಲಿಯವರೆಗೆ ಮಾದನ ಹಿಪ್ಪರಗಾ ಠಾಣೆಯಲ್ಲಿ ಎ.ಎಸ್.ಐ ಅಂತಾ ಅಂತಾ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 26-12-2024 ರಂದು ಚಾಸಾ 19 ರವರ ಕಡೆಯಿಂದ ಈ ಪ್ರಕರಣದ ಕಡವನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ. ಅದೇ ದಿನ ನಾನು ಮತ್ತು ಚಾಸಾ 17 ರವರು ಸೇರಿಕೊಂಡು ಮೃತ ಪರಮೇಶ್ವರವರ ಶವ ಪಂಚನಾಮೆಯನ್ನು ಚಾಸಾ 3 ಮತ್ತು 4 ರವರ ಸಮಕ್ಷಮದಲ್ಲಿ ಬೆ. 8.00 ರಿಂದ 9.00 ಗಂಟೆಯವರೆಗೆ ಪಂಚನಾಮೆ ಮಾಡಿ ಒಂದು ಭಾವ ಚಿತ್ರವನ್ನು ತೆಗೆದುಕೊಂಡಿರುತ್ತೇನೆ. ಚಾಸಾ 17 ರವರಿಗೆ ಶವ ಬೆಂಗಾವಲ ಕರ್ತವ್ಯಕ್ಕೆ ನೇಮಕ ಮಾಡಿರುತ್ತೇನೆ. ಅದೇ ದಿನ ವೈದ್ಯಾಧಿಕಾರಿಗಳಿಗೆ ಶವ ತನಿಖಾ ವರದಿಯನ್ನು ನೀಡುವ ಕುರಿತು ಅರ್ಜಿ ಸಲ್ಲಿಸಿರುತ್ತೇನೆ. ಅದೇ ದಿನ ಚಾಸಾ 1 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಮುಂದಿನ ತನಿಖೆಗಾಗಿ ಚಾಸಾ 21 ರವರಿಗೆ ಕಡತವನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು ನಿಪಿ.12 ರಲ್ಲಿ ಅವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 12(ಎ) ಅಂತಾ ಗುರುತಿಸಲಾಯಿತು. ಸಾಕ್ಷಿಯು ಶವ ಪರೀಕ್ಷೆಗಾಗಿ ಕಳುಹಿಸಿದ ಮೃತ ದೇಹದೊಂದಿಗೆ ಸಲ್ಲಿಸತಕ್ಕ ವರದಿಯನ್ನು ನೋಡಿ ಗುರುತಿಸಿದ ಕಾರಣ ಅದನ್ನು ನಿಪಿ. 14 ಎಂದು, ಸಾಕ್ಷಿಯ ಸಹಿಯನ್ನು ನಿಪಿ. 14 (ಎ) ಅಂತಾ ಗುರುತಿಸಲಾಯಿತು. ಸಾಕ್ಷಿಯು ಒಂದು ಭಾವ ಚಿತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 15 ಅಂತಾ ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ **ಶ್ರೀ. ಎಸ್ ಡಿ ಬಿ** ವಕೀಲರಿಂದ:

ದಿಃ 26-12-2024 ರಂದು ಚಾಸಾ 19 ರವರ ಕಡೆಯಿಂದ ಈ ಪ್ರಕರಣದ ಕಡವನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ನಾನು

ಮತ್ತು ಚಾಸಾ 17 ರವರು ಸೇರಿಕೊಂಡು ಮೃತ ಪರಮೇಶ್ವರವರ ಶವ ಪಂಚನಾಮೆಯನ್ನು ಚಾಸಾ 3 ಮತ್ತು 4 ರವರ ಸಮಕ್ಷಮದಲ್ಲಿ ಬೆ. 8.00 ರಿಂದ 9.00 ಗಂಟೆಯವರೆಗೆ ಪಂಚನಾಮೆ ಮಾಡಿ ಒಂದು ಭಾವ ಚಿತ್ರವನ್ನು ತೆಗೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ 17 ರವರಿಗೆ ಶವ ಬೆಂಗಾವಲ ಕರ್ತವ್ಯಕ್ಕೆ ನೇಮಕ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ವೈದ್ಯಾಧಿಕಾರಿಗಳಿಗೆ ಶವ ತನಿಖಾ ವರದಿಯನ್ನು ನೀಡುವ ಕುರಿತು ಅರ್ಜಿ ಸಲ್ಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ಚಾಸಾ 1 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಮುಂದಿನ ತನಿಖೆಗಾಗಿ ಚಾಸಾ 21 ರವರಿಗೆ ಕಡತವನ್ನು ಸಲ್ಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.
ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಸಾ.ಓ.ಹೇ.ಕೇ.ಸ.ಇ.ಅದೆ.

ಸಿ.ಸಿ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ.ಎಫ್.ಸಿ ಆಳಂದ